ಕರ್ನಾಟಕ ವಿಧಾನ ಸಭೆ. ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಸಭಾ ಸ್ಪೀಕರ್

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ

ದಿನಾಂಕ : DATE : 31/5/2021

# ಸ್ಥಳ ಪರಿಶೀಲನೆಗೆ ತಡೆ: ಸ್ಪೀಕರ್ ಕಚೇರಿ ಸ್ಪಷ್ಟನೆ

**ಬೆಂಗಳೂರು:** ಕೊರೊನಾ ಸೋಂಕು ಹರಡದಂತೆ ತಡೆಯುವ ಉದ್ದೇಶದಿಂದ ವಿಧಾನ ಮಂಡಲದ ಸಮಿತಿಗಳ ಸಭೆಗೆ ಅಧ್ಯಯನ ಪ್ರವಾಸ ಹಾಗೂ ಸ್ಥಳ ಪರಿಶೀಲನೆಗೆ ತೆರಳುವುದಕ್ಕೆ ಈಗಾಗಲೇ ತಡೆ ನೀಡಲಾಗಿದೆಯೇ ವಿನಃ ಭ್ರಷ್ಟಾಚಾರಕ್ಕೆ ರಕ್ಷಣೆ ನೀಡುವ ಉದ್ದೇಶದಿಂದಲ್ಲ ಎಂದು ಸ್ಪೀಕರ್ ಕಚೇರಿ ಸ್ಪಷ್ಟನೆ ನೀಡಿದೆ.

ಆರೋಗ್ಯ ಇಲಾಖೆಯಲ್ಲಿ ಕೊರೊನಾ ನಿಯಂತ್ರಣಕ್ಕಾಗಿ ಖರೀದಿಸಿದ ವಸ್ತುಗಳಲ್ಲಿ ಅಕ್ರಮವಾಗಿದೆ ಎಂದು ಆರೋಪಿಸಿ ವಿಧಾನಮಂಡಲದ ಸಾರ್ವಜನಿಕ ಲೆಕ್ಕಪತ್ರ ಸಮಿತಿ ಸ್ಥಳ ಪರಿಶೀಲನೆಗೆ ಸ್ಪೀಕರ್ ಕಾಗೇರಿ ತಡೆ ನೀಡಿರುವ ವಿಚಾರ ಮಾಧ್ಯಮಗಳಲ್ಲಿ ತೀವ್ರ ಚರ್ಚೆಗೆ ಕಾರಣವಾದ ಹಿನ್ನೆಲೆಯಲ್ಲಿ ಈ ಸ್ಪಷ್ಟನೆ ನೀಡಲಾಗಿದೆ.

ಸಮಿತಿ ಸಭೆಗಳನ್ನು ನಡೆಸುವಾಗ ಕೊರೊನಾ ವೈರಾಣು ಹತೋಟಿಗೆ ತರಲು ಶ್ರಮಿಸುತ್ತಿರುವ ಇಲಾಖೆಗಳನ್ನು ಹೊರತುಪಡಿಸಿ ಸಭೆ ನಡೆಸಲು ಸೂಚನೆ ನೀಡಲಾಗಿತ್ತು. ಸಮಿತಿಯು ಅಧಿಕಾರಿಗಳು, ಸಾರ್ವಜನಿಕರನ್ನು ಮುಕ್ತವಾಗಿ ಭೇಟಿ ಮಾಡುವ ಸಂದರ್ಭ ಸೃಷ್ಟಿಯಾಗುತ್ತದೆ. ಹೀಗಾಗಿಯೇ ರಾಜ್ಯದೊಳಗೆ ಹಾಗೂ ಹೊರ ರಾಜ್ಯ ಪ್ರವಾಸ ಕೈಗೊಳ್ಳದಂತೆ ಮುಂದಿನ ಆದೇಶದವರೆಗೆ ಸೂಚನೆ ನೀಡಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.